ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ:- 2022-23ನೇ ಸಾಲಿನ ಎಸ್.ಎಸ್.ಎಲ್.ಸಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ನಡೆಸುವ ಕುರಿತು.

ಓದಲಾಗಿದೆ:-
1. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ, ಏಕಕಡತ ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಪೂ.ಸಿ.ಪ/45/2021-22, ದಿ:01/10/2023.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 302 ಎಸ್‌ಎಲ್‌ಬಿ 2017, ದಿ:28.01.2019.
3. ಸರ್ಕಾರದ ಆದೇಶ ಸಂಖ್ಯೆ : ಇಪಿ 197 ಎಸ್‌ಎಲ್‌ಬಿ 2021, ದಿ:04-12-2021.

* * * * *

ಪ್ರಸ್ತಾವನೆ :-

ಮೇಲೆ ಓದಲಾದ-1ರ ಏಕಕಡತ ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಪೂ.ಸಿ.ಪ/45/2021-22ರ ಏಕ ಕಡತದಲ್ಲಿ 2022-23ನೇ ಸಾಲಿನ ಪೂರ್ವ ಸಿದ್ಧತಾ ಪರೀಕ್ಷೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿಯೇ ನಡೆಸಲು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಅನುಮೋದನೆ ನೀಡಿರುತ್ತಾರೆ.

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಮಾದರಿ ಪ್ರಶ್ನೆ ಪತ್ರಿಕೆಯನ್ನು ಅಪ್‌ಲೋಡ್ ಮಾಡಿ ಅದರನ್ವಯ ತಾಲ್ಲೂಕು ಹಂತದಲ್ಲಿ ಪ್ರಶ್ನೆಪತ್ರಿಕೆಯನ್ನು ಸಿದ್ಧಪಡಿಸಿ, ಸದರಿ ಪ್ರಶ್ನೆ ಪತ್ರಿಕೆಗಳನ್ನು ತಾಲ್ಲೂಕು ಹಂತದ ಸ್ಟ್ರಾಂಗ್ ರೂಂನಲ್ಲಿ ಸುರಕ್ಷಿತವಾಗಿಟ್ಟು, ಅಯಾ ವಿಷಯದ ಪರೀಕ್ಷಾ ದಿನದಂದು ಶಾಲೆಗಳಿಗೆ ವಿತರಿಸಿ, ಒಟ್ಟಾರೆ ಪೂರ್ವ ಸಿದ್ಧತಾ ಪರೀಕ್ಷೆಯನ್ನು ಜಿಲ್ಲಾ ಉಪನಿರ್ದೇಶಕರ ನೇತೃತ್ವದಲ್ಲಿ ಹಾಗೂ ಶಿಕ್ಷಣಾಧಿಕಾರಿಗಳ ಹಂತದಲ್ಲಿಯೇ 2022-23ನೇ ಸಾಲಿನ ಎಸ್.ಎಸ್.ಎಲ್.ಸಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ನಡೆಸಬಹುದೆಂದು ಅಭಿಪ್ರಾಯಿಸಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 197 ಎಸ್‌ಎಲ್‌ಬಿ 2021,**
**ಬೆಂಗಳೂರು, ದಿನಾಂಕ: 25ನೇ ಜನವರಿ 2023**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ 2022-23ನೇ ಸಾಲಿನ ಎಸ್.ಎಸ್.ಎಲ್.ಸಿ ಪೂರ್ವ ಸಿದ್ಧತಾ ಪರೀಕ್ಷೆಗೆ ಸಂಬಂಧಿಸಿದಂತೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಮಾದರಿ ಪ್ರಶ್ನೆಪತ್ರಿಕೆಯನ್ನು ಅಪ್‌ಲೋಡ್ ಮಾಡುವುದು ಮತ್ತು ಫೆಬ್ರವರಿ-2023ರ ಮಾಹೆಯಲ್ಲಿ ಪರೀಕ್ಷೆ ನಡೆಸುವಂತೆ ವೇಳಾ ಪಟ್ಟಿಯನ್ನು ಪ್ರಕಟಿಸುವುದು.

ಮಂಡಲಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಅಪ್‌ಲೋಡ್ ಮಾಡಲಾದ ಮಾದರಿ ಪ್ರಶ್ನೆಪತ್ರಿಕೆಯಂತೆ ತಮ್ಮ ಹಂತದಲ್ಲಿ ಪ್ರಶ್ನೆಪತ್ರಿಕೆಯನ್ನು ಸಿದ್ಧಪಡಿಸಿಕೊಂಡು, ಸದರಿ ಪ್ರಶ್ನೆಪತ್ರಿಕೆಗಳನ್ನು ತಾಲ್ಲೂಕು ಹಂತದ ಸ್ಟ್ರಾಂಗ್ ರೂಂನಲ್ಲಿ ಸುರಕ್ಷಿತವಾಗಿಟ್ಟು, ಆಯಾ ವಿಷಯದ ಪರೀಕ್ಷಾ ದಿನದಂದು ಶಾಲೆಗಳಿಗೆ ವಿತರಿಸಿ, ಒಟ್ಟಾರೆ ಪೂರ್ವ ಸಿದ್ಧತಾ ಪರೀಕ್ಷೆಯನ್ನು ಜಿಲ್ಲಾ ಉಪನಿರ್ದೇಶಕರ ನೇತೃತ್ವದಲ್ಲಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಗೌಪ್ಯತೆ ಮತ್ತು ಸುರಕ್ಷತೆಯೊಂದಿಗೆ ಸುಲಲಿತವಾಗಿ ನಡೆಸಲು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅನುಮತಿ ನೀಡಿದೆ.



Scanned with CamScanner

ಮುಂದುವರೆದರು ಸದರಿ ಪೂರ್ವ ಸಿದ್ಧತಾ ಪರೀಕ್ಷೆಗೆ ಪ್ರತಿ ವಿದ್ಯಾರ್ಥಿಗೆ ರೂ.60/- (ಅರವತ್ತು ರೂಪಾಯಿ ಮಾತ್ರ) ರಂತೆ ಪರೀಕ್ಷಾ ಶುಲ್ಕವನ್ನು ನಿಗದಿಪಡಿಸಿದೆ. ವಿದ್ಯಾರ್ಥಿಗಳಿಂದ ಪಡೆದ ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರು ಆಯಾ ಕ್ಷೇತ ಶಿಕ್ಷಣಾಧಿಕಾರಿಗಳ ಬ್ಯಾಂಕ್ ಖಾತೆಗೆ ಜಮೆ ಮಾಡುವುದು. ಕ್ಷೇತ್ರ ಶಿಕ್ಷಣಾಧಿಕಾರಿಗಳು ಪರೀಕ್ಷಾ ಶುಲ್ಕ ಸ್ವೀಕರಿಸಿದ ಮತ್ತು ಪರೀಕ್ಷಾ ಖರ್ಚುವೆಚ್ಚಗಳ ಕುರಿತು ಲೆಕ್ಕಪತ್ರ ನಿರ್ವಹಿಸಿ ತಪಾಸಣಾ ಸಮಯದಲ್ಲಿ ಹಾಜರುಪಡಿಸುವುದು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
V.S. 25/1/2023
(ವಿ. ಶ್ರೀನಿವಾಸಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

ರವರಿಗೆ:

1. ಪ್ರಧಾನ ಮಹಾ ಲೇಖಪಾಲರು - ಕರ್ನಾಟಕ (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ ಕಲಬುರುಗಿ.
3. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
4. ನಿರ್ದೇಶಕರು (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
5. ನಿರ್ದೇಶಕರು ( ಪರಿಕ್ಷೆಗಳು), ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಹೊಸಕೆರೆಹಳ್ಳಿ, ಬೆಂಗಳೂರು.
7. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ. (ಸಂಬಂಧಿಸಿದ ಆಯುಕ್ತರ ಮುಖಾಂತರ)
8. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ (ಸಂಬಂಧಿಸಿದ ಉಪನಿರ್ದೇಶಕರ ಮುಖಾಂತರ).

ಪ್ರತಿ :-

1. ಸರ್ಕಾರದ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಇವರ ಆಪ್ತ ಶಾಖೆಗೆ.
3. ಸರ್ಕಾರದ ಉಪ ಕಾರ್ಯದರ್ಶಿ (ಸೇವೆಗಳು-1), ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಇವರ ಆಪ್ತ ಸಹಾಯಕರಿಗೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.



Scanned with CamScanner